# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ಚೌಕ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 23.07.2020**

## ಪೂಜ್ಯ ಮಹಾಪೌರರು ರವರು ಮಹದೇವಪುರ ವಲಯದ ಕೋವಿಡ್-19 ಕಮಾಂಡ್ ಕಂಟ್ರೋಲ್ ಸೆಂಟರ್‌ಗೆ ಭೇಟಿ ನೀಡಿರುವ ಬಗ್ಗೆ:

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಮಹದೇವಪುರ ವಲಯ ವ್ಯಾಪ್ತಿಯ ಲೌರಿ ಮೆಮೋರಿಯಲ್ ಹೈಸ್ಕೂಲಿನ ಲೌರಿ ಸ್ಪೋರ್ಟ್ಸ್ ಕಾಂಪ್ಲೆಕ್ಸ್ ನಲ್ಲಿ ಸ್ಥಾಪಿಸಿರುವ ಕೋವಿಡ್-19 ಕಮಾಂಡ್ ಕಂಟ್ರೋಲ್ ಸೆಂಟರ್ ಗೆ ಇಂದು ಪೂಜ್ಯ ಮಹಾಪೌರರು ರವರು ಭೇಟಿ ನೀಡಿ ಅಲ್ಲಿನ ವ್ಯವಸ್ಥೆಯ ಕುರಿತು ಪರಿಶೀಲನೆ ನಡೆಸಿದರು. ಈ ವೇಳೆ ವಲಯ ಜಂಟಿ ಆಯುಕ್ತರು ಶ್ರೀ ವೆಂಕಟಾಚಲಪತಿ, ಮುಖ್ಯ ಅಭಿಯಂತರರು ಶ್ರೀ ಪರಮೇಶ್ವರ್ ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

ಮಹದೇವಪುರ ವಲಯ ವ್ಯಾಪ್ತಿಗೆ ಸಂಬಂಧಿಸಿದಂತೆ ಕೋವಿಡ್-19 ಕಮಾಂಡ್ ಕಂಟ್ರೋಲ್ ಸೆಂಟರ್ ಕಾರ್ಯ ನಿರ್ವಹಣೆ ಕುರಿತು ಮಾಹಿತಿ ಪಡೆಯಲಾಯಿತು. ಸದರಿ ವಲಯದಲ್ಲಿ ಕೋವಿಡ್-19 ಸೋಂಕು ಕಂಡುಬಂದ ವ್ಯಕ್ತಿಗಳನ್ನು ಕೂಡಲೆ ಆಸ್ಪತ್ರೆ/ಕೋವಿಡ್ ಆರೈಕೆ ಕೇಂದ್ರಕ್ಕೆ ರವಾನಿಸುವ ವ್ಯವಸ್ಥೆ ಮಾಡಬೇಕು. ಹೋಮ್ ಐಸೊಲೇಶನ್ ನಲ್ಲಿರುವವರಿಗೆ ಅಗತ್ಯ ಸೇವೆಗಳನ್ನು ಸಮರ್ಪಕವಾಗಿ ಒದಗಿಸುವಂತೆ ಸೂಕ್ತ ಕ್ರಮ ವಹಿಸಬೇಕು. ಅಲ್ಲದೆ, ಅಂತಹವರು ಮನೆಯಿಂದ ಹೊರಗಡೆ ಬಾರದಂತೆ ನೋಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಕಂಟೈನ್ಮೆಂಟ್ ಪ್ರದೇಶದಲ್ಲಿ ನಾಗರಿಕರಿಗೆ ಯಾವುದೇ ಸಮಸ್ಯೆ ಆಗದಂತೆ ನೋಡಿಕೊಳ್ಳಬೇಕು. ಪ್ರಥಮ ಸಂಪರ್ಕಿತರು ಹಾಗೂ ದ್ವಿತೀಯ ಸಂಪರ್ಕಿತರ ಮೇಲೆ ನಿಗಾವಹಿಸಬೇಕು. ಗೃಹಬಂಧನದಲ್ಲಿರುವವರು ಮನೆಯಿಂದಾಚೆ ಬಾರದಂತೆ ನೋಡಿಕೊಳ್ಳಬೇಕು. ನಿಯಮ ಉಲ್ಲಂಘಿಸಿದರೆ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಸೂಚನೆ ನೀಡಿದರು. ನಾಗರೀಕರು ಹೆಲ್ಪ್ ಡೆಸ್ಕ್ ಗೆ ಕರೆ ಮಾಡಿದಾಗ ಕೂಡಲೆ ಅವರಿಗೆ ಸ್ಪಂದಿಸಬೇಕು. ಅದಕ್ಕಾಗಿ ಅಗತ್ಯ ಸಿಬ್ಬಂದಿಯನ್ನು ನಿಯೋಜನೆ ಮಾಡಿಕೊಳ್ಳಿ ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ಕೋವಿಡ್ ಸೋಂಕಿತರನ್ನು ಆಸ್ಪತ್ರೆ/ಕೋವಿಡ್ ಅರೈಕೆ ಕೆಂದ್ರಗಳಿಗೆ ಕರೆದೊಯ್ಯಲು ಆಂಬ್ಯುಲ್ಸ್ ಗಳ ಕೊರತೆಯಾಗದಂತೆ ನೋಡಿಕೊಳ್ಳಬೇಕು ಎಂದು ಸೂಚನೆ ನೀಡಿದರು.

### ಟಿನ್ ಫ್ಯಾಕ್ಟರಿ ಜಂಕ್ಷನ್ ಬಳಿ ರಾಜಕಾಲುವೆ ಪರಿಶೀಲನೆ:

ಮಹದೇವಪುರ ವಲಯ ವ್ಯಾಪ್ತಿಯ ಕೆ.ಆರ್.ಪುರಂ, ಪೈ ಲೇಔಟ್, ಟಿನ್ ಫ್ಯಾಕ್ಟರಿ ಜಂಕ್ಷನ್ ಬಳಿಯ ಮೇಲ್ಸೇತುವೆ ಕೆಳಭಾಗದಲ್ಲಿ ಸುಮಾರು 8 ವರ್ಷಗಳಿಂದ 80 ಮೀಟರ್ ಸಾಮರ್ಥ್ಯದ ಮೂರು ಪೈಪ್ ಗಳಲ್ಲಿ ಹೂಳು ತುಂಬಿಕೊಂಡಿದ್ದ ಪರಿಣಾಮ ಪ್ರತಿ ವರ್ಷವೂ ಮಳೆಗಾಲದ ವೇಳೆ ಆ ಸ್ಥಳ ಜಲಾವೃತಗೊಳ್ಳುತ್ತಿತ್ತು. ಅದಕ್ಕೆ ಶಾಶ್ವತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಸಿಬ್ಬಂದಿ, ಜೆಸಿಬಿ ಸಹಯೋಗದಲ್ಲಿ ಮೂರು ಪೈಪ್ ಗಳಲ್ಲಿ ಸಂಪೂರ್ಣ ಹೂಳನ್ನು ತೆಗೆಸಲಾಗಿದ್ದು, ಇದೀಗ ಯಾವುದೇ ಸಮಸ್ಯೆ ಇಲ್ಲದೆ ಸರಾಗವಾಗಿ ನೀರು ಹರಿಯುತ್ತಿದ್ದು, ಜಲಾವೃತವಾಗುವುದನ್ನು ತಪ್ಪಿಸಲಾಗಿದೆ. ಸದರಿ ಸ್ಥಳಕ್ಕೆ ಇಂದು ಪೂಜ್ಯ ಮಹಾಪೌರರು ಭೇಟಿ ನೀಡಿ ಪರಿಶೀಲನೆ ನಡೆಸಿ, ಸಮಸ್ಯೆ ಬಗೆಹರಿಸಿರುವುದಕ್ಕೆ ಮುಖ್ಯ ಅಭಿಯಂತರರಿಗೆ ಶ್ಲಾಘನೀಯ ವ್ಯಕ್ತಪಡಿಸಿದರು.

ಇನ್ನು ಮುಂದೆ ಮಳೆಗಾಲದಲ್ಲಿ ಯಾವುದೇ ಸಮಸ್ಯೆ ಆಗದಂತೆ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು. ಆಗಿಂದಾಗ್ಗೆ ಒಳಹರಿವು ಕಾಲುವೆಗಳಲ್ಲಿ ಹೂಳನ್ನು ತೆರವುಗೊಳಿಸುತ್ತಿರಬೇಕು. ಅಲ್ಲದೆ ಇತರೆ ಜಲಾವೃತಗೊಳ್ಳುವ ಪ್ರದೇಶಗಳಲ್ಲಿಯೂ ಶಾಶ್ವತ ಪರಿಹಾರ ಕಂಡುಕೊಳ್ಳಬೇಕು. ಮಳೆಗಾಲದಲ್ಲಿ ಜನರಿಗೆ ಯಾವುದೇ ಸಮಸ್ಯೆ ಆಗದಂತೆ ನೋಡಿಕೊಳ್ಳಬೇಕು ಎಂದು ಪೂಜ್ಯ ಮಹಾಪೌರರು ರವರು ಮುಖ್ಯ ಅಭಿಯಂರರಿಗೆ ಸೂಚನೆ ನೀಡಿದರು.

**ಈ ಮೇಲ್ಕಂಡ ವಿಷಯವನ್ನು ತಮ್ಮ ಮಾಧ್ಯಮದಲ್ಲಿ ಪ್ರಚುರಪಡಿಸಲು ಕೋರಿದೆ.**

**ಸಾರ್ವಜನಿಕ ಸಂಪರ್ಕಾಧಿಕಾರಿ**